ನ್ಯಾಯಾಧೀಶರ ನೇಮಕ

1149(2317); ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ರಾಜ್ಯದ ನ್ಯಾಯಾಲಯಗಳಲ್ಲಿ ನ್ಯಾಯಾಧೀಶರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನ್ಯಾಯಾಧೀಶರ ಕೊರತೆಯಿಂದಾಗಿ, ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಉಳಿದಿರುವ ಬಾಕಿ ಪ್ರಕರಣಗಳ ಸಂಖ್ಯೆ ಎಷ್ಟು; ವಿಲೇವಾರಿಯಾಗದೇ ಉಳಿದಿರುವ ಪ್ರಕರಣಗಳೆಷ್ಟು;

ಇ) ಹಾಗಿದ್ದಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಖಾಲಿ ಇರುವ ನ್ಯಾಯಾಧೀಶರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು, ಪಶು ಸಂಗೋಪನಾ ಮತ್ತು ಮುಜರಾಯಿ ಸಚಿವರು)

ಅ) ಹೌದು

ಆ) ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ಒಟ್ಟು 12,40,395 ಪ್ರಕರಣಗಳು ವಿಲೇವಾರಿಯಾಗದೆ ಬಾಕಿ ಉಳಿದಿರುತ್ತವೆ.

ಇ) ಖಾಲಿ ಇರುವ ನ್ಯಾಯಾಧೀಶರ ಹುದ್ದೆಗಳನ್ನು ಬಡ್ತಿ ಹಾಗೂ ನೇರನೇಮಕಾತಿ ಮೂಲಕ ತುಂಬುವ ಪ್ರಕ್ರಿಯೆಯನ್ನು ರಾಜ್ಯ ಉಚ್ಚ ನ್ಯಾಯಾಲಯವು ಪ್ರಾರಂಭಿಸಿದೆ. ಶೀಘ್ರದಲ್ಲಿಯೇ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.